755 ಶ್ರೀ ಪಾಟೀಲ್ ಎ.ಬಿ. (ಸಂಕೇಶ್ವರ್): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ರಾಜ್ಯದ ಅನುದಾನಿತ ಕಾಲೇಜುಗಳಲ್ಲಿ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಈ ಮೂರೂ ವಿಭಾಗಗಳ ಉಪನ್ಯಾಸಕರ ಹುದ್ದೆಗಳು ಖಾಲಿಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ ಹುದ್ದೆಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ;

ಇ) ಕ್ರಮ ಕೈಗೊಳ್ಳದಿದ್ದರೆ, ಯಾವಾಗ ಉಪನ್ಯಾಸಕರ ಹುದ್ದೆಗಳನ್ನು ತುಂಬಲಾಗುವುದು?

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

ಅ) ಹೌದು.

ಆ) ಸರ್ಕಾರದ ಆದೇಶ ಸಂಖ್ಯೆ: ಇಡಿ 46 ಎಸ್‌ಇಪಿ 2006, ದಿನಾಂಕ:12.04.2006 ರಲ್ಲಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 282 ಅನುದಾನಿತ ಉಪನ್ಯಾಸಕ ಹುದ್ದೆಗಳನ್ನು ತುಂಬಿಕೊಳ್ಳಲು ಆರ್ಥಿಕ ಮಿತವ್ಯಯ ಸಡಿಲಿಸಿ ಅನುಮತಿ ನೀಡಲಾಗಿದೆ.

ಇ) ಮೇಲೆ 'ಅ' ನಲ್ಲಿ ನೀಡಿರುವ ಉತ್ತರದನ್ವಯ ಉದ್ಭವಿಸುವುದಿಲ್ಲ.

987 (589) ಶ್ರೀ ಚನ್ನಬಸವರಾಜ್(ಅಪ್ಪಾಜಿ) ಶಂಕರರಾವ್ ನಾಡಗೌಡ : ಮಾನ್ಯ ಜಲಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ;

ಅ) ಕೃಷ್ಣಾ ಮೇಲ್ದಂಡೆ ಯೋಜನೆಯ ನಾರಾಯಣಪೂರ ಅಣೆಕಟ್ಟಿನ ಹಿನ್ನೀರಿನಿಂದ ಹೆಚ್ಚುವರಿ ಪ್ರದೇಶಗಳು ಮುಳುಗಡೆಯಾಗುವುದೇ;

ಆ) ಹಾಗಿದ್ದಲ್ಲಿ ಯಾವ ಯಾವ ಹಳ್ಳಿಗಳು ಹೆಚ್ಚುವರಿಯಾಗಿ ಮುಳುಗಡೆಯಗುತ್ತವೆ;

ಇ) ಈ ರೀತಿ ಮುಳುಗಡೆಯಾದ ಪ್ರದೇಶಗಳ ರೈತರಿಗೆ ಪರಿಹಾರ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಈ) ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಹೆಚ್ಚುವರಿ ಹಿನ್ನೀರಿನಿಂದ ಮುಳುಗಡೆಯಾಗಿರುವ ರೈತರಿಗೆ ಪರಿಹಾರ ನೀಡಲಾಗಿದೆಯೇ?